ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಮ್. ಎಫ್. ಸಿ ನ್ಯಾಯಾಲಯ ಯಾದಗಿರಿ.

ಸಿಸಿ ನಂ. **340/2020**

| | | |
|---|---|---|
| ಸಾಕ್ಷಿಯ ಹೆಸರುಃ | ಗೋಪಾಲರೆಡ್ಡಿ | ಪ್ರಾಸಾಃ 4 |
| ತಂದೆ/ಗಂಡನ ಹೆಸರುಃ | ಶರಣಪ್ಪ | ಚಾಸಾಃ 8 |
| ವಯಸ್ಸು ಃ | 52 ವರ್ಷ | ದಿಃ 09-01-2026 |
| ಉದ್ಯೋಗಃ | ಎ. ಎಸ್. ಐ | ಸಾಕ್ಷಿದಾರರಿಗೆ ಪ್ರಮಾಣ ವಚನ ಭೋದಿಸಲಾಯಿತು. |
| ವಾಸ ಸ್ಥಳಃ | ಯಾದಗಿರಿ. | |

<u>ಮುಖ್ಯ ವಿಚಾರಣೆ ಮಾನ್ಯ ಸಹಾಯಕ ಸರ್ಕಾರಿ ಅಬಿಯೋಜಕರವರಿಂದಃ</u>

ನಾನು 2018 ರಿಂದ 2021 ರವರೆಗೆ ಸೈದಾಪೂರ ಪೋಲಿಸ ಠಾಣೆಯಲ್ಲಿ ನಾನು ಮುಖ್ಯ ಪೇದೆ ಎಂದು ಕರ್ತವ್ಯವನ್ನು ನಿರ್ವಹಿಸಿರುತ್ತೇನೆ.

ದಿನಾಂಕ 01-05-2020 ರಂದು 3.10 ಪಿ. ಎಮ್ ಸುಮಾರಿಗೆ ನಾನು ಠಾಣೆಯಲ್ಲಿದ್ದಾಗ ಚಾಸಾಃ 1 ರವರು ಮುದ್ದೆ ಮಾಲು ಮತ್ತು ಜಪ್ತಿ ಪಂಚನಾಮೆಯನ್ನು ಹಾಜರು ಪಡಿಸಿದಾಗ ನಾನು ಸದರಿ ಆಧಾರದ ಮೇಲೆ ನಮ್ಮ ಠಾಣಾ ಗುನ್ನೆ ಸಂಖ್ಯೆಃ 65/2020 ದಾಖಲಿಸಿಕೊಂಡಿರುತ್ತೇನೆ. ನಂತರ ಪ್ರ.ವ.ವರದಿಯನ್ನು ನ್ಯಾಯಾಲಯಕ್ಕೆ ಕಳುಹಿಸಿರುತ್ತೇನೆ. ನಂತರ ಪ್ರ. ವ. ವರದಿಯನ್ನು ತೋರಿಸಲಾಗಿ ಸಾಕ್ಷಿಯು ಅದನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-3 ಎಂದು ಸಾಕ್ಷಿಯ ಸಹಿ ನಿಪಿ-3(ಎ) ಎಂದು ಗುರುತಿಸಲಾಯಿತು. ನಂತರ ಚಾಸಾಃ 4 ರಿಂದ 6 ರವರ ಹೇಳಿಕೆಗಳನ್ನು ಪಡೆದಿರುತ್ತೇನೆ. ದಿನಾಂಕಃ 03-07-2020 ರಂದು ತಜ್ಞರ ವರದಿಯನ್ನು ಪಡೆದುಕೊಂಡಿರುತ್ತೇನೆ. ಅದನ್ನು ನಿಪಿ-4 ಮತ್ತು ಸಾಕ್ಷಿಯ ಸಹಿಯನ್ನು ನಿಪಿ-4(ಎ) ಎಂದು ಗುರುತಿಸಲಾಯಿತು. ನಂತರ ಅಂತಿಮ ವರದಿಯನ್ನು ಸಲ್ಲಿಸಿರುತ್ತೇನೆ. ನಿಪಿ-2 ರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-2(ಬಿ) ಎಂದು ಗುರುತಿಸಲಾಯಿತು. ಸಾಕ್ಷಿಯು ಮು. ಮಾ. ಮತ್ತು ಆರೋಪಿತನನ್ನು ನೋಡಿ ಗುರುತಿಸಿರುತ್ತಾರೆ.

<u>ಪಾಟಿ ಸವಾಲುಃ ಆರೋಪಿ ಪರ ಶ್ರೀ ಜಿ. ಎಮ್. ಎಮ್. ವಕೀಲರಿಂದ.</u>

1. ಸಾರಾಯಿ ಮತ್ತು ಹೆಂಡ ಬೇರೆ-ಬೇರೆ ಎಂದರೆ ಸರಿ. ನಿಪಿ-4 ರಲ್ಲಿ ಸಾರಾಯಿ ಇರುವುದಿಲ್ಲ ಎಂದು ನಮೂದು ಇರುತ್ತದೆ ಎಂದರೆ ಸರಿ. ನಾನು ಮುಖ್ಯ ಪೇದೆ ಇರುವುದರಿಂದ ತನಿಖೆ ಮಾಡುವ

ಅಧಿಕಾರ ಇರುವುದಿಲ್ಲ ಎಂದರೆ ಸರಿಯಲ್ಲ. ನಾನು ಸ್ವತಂತ್ರ ಸಾಕ್ಷಿದಾರರ ಹೇಳಿಕೆಯನ್ನು ಪಡೆದುಕೊಂಡಿರುವುದಿಲ್ಲ ಎಂದರೆ ಸರಿಯಲ್ಲ. ಚಾಸಾಃ 1 ರವರ ಮಾತು ಕೇಳಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಸುಳ್ಳು ಅಂತಿಮ ವರದಿಯನ್ನು ಸಲ್ಲಿಸಿರುತ್ತೇನೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆಃ ಇಲ್ಲ.

(ಸಾಕ್ಷಿ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು).

ಓ. ಹೇ. ಕೇ. ಸರಿ ಇದೆ.

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ.ದಂಡಾಧಿಕಾರಿಗಳು ಯಾದಗಿರಿ